# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕರ್ನಾಟಕ ರಾಜ್ಯದ ಲಾಂಛನವನ್ನು ಬಳಸುವ ಕುರಿತು.

**ಓದಲಾಗಿದೆ:** ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಕಡತ ಸಂಖ್ಯೆ ಗ್ರಾಅಪ/320/ಉಖಾಯೋ/2016 ಕಂಡಿಕೆ 13 ರಲ್ಲಿ ಆದೇಶಿಸಿದಂತೆ

*******

**ಪ್ರಸ್ತಾವನೆ:**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕೇಂದ್ರ ಸರ್ಕಾರವು ಸೂಚಿಸಿದ ಅಧಿಕೃತ ಲಾಂಛನವನ್ನು ರಾಜ್ಯದಲ್ಲಿ ಇದುವರೆಗೆ ಅನುಷ್ಠಾನಗೊಳಿಸಲಾಗುತ್ತಿದೆ.

ಮುಂದುವರೆದು ಓದಲಾದ ಕಡತ ಸಂಖ್ಯೆ ಗ್ರಾಅಪ/320/ಉಖಾಯೋ/2016 ಕಂಡಿಕೆ 13 ರಲ್ಲಿ ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಹೊಸದಾಗಿ ಸಿದ್ಧಪಡಿಸಿದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಲಾಂಛನವನ್ನು ದಿ:03.06.2016 ರಂದು ಅನುಮೋದಿಸಿರುತ್ತಾರೆ. ಸದರಿ ಲಾಂಛನವನ್ನು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯಿತಿ ಮತ್ತು ಅನುಷ್ಠಾನ ಇಲಾಖೆಗಳು ಸರ್ಕಾರದ ದೈನಂದಿನ ಪತ್ರ ವ್ಯವಹಾರಗಳಲ್ಲಿ ಬಳಸುವ ಪತ್ರಗಳ ತಲೆಬರಹದಲ್ಲಿ (Letter head) ಈ ಲಾಂಛನವನ್ನು ಕಡ್ಡಾಯವಾಗಿ ಬಳಸುವಂತೆ ನಿರ್ಧರಿಸಿದೆ ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:320:ಉಖಾಯೋ:2016 ದಿ:18.06.2016**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಈ ಪತ್ರಕ್ಕೆ ಲಗತ್ತಿಸಿದ ಲಾಂಛನವನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಅನುಮೋದಿಸಿದ ಲಾಂಛನವನ್ನು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತ್, ತಾಲ್ಲೂಕು ಪಂಚಾಯಿತ್ ಹಾಗೂ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಲ್ಲಿ ಸರ್ಕಾರದ ದೈನಂದಿನ ಪತ್ರ ವ್ಯವಹಾರಗಳಲ್ಲಿ ಬಳಸುವ ಪತ್ರಗಳ ತಲೆಬರಹದಲ್ಲಿ (Letter head) ಈ ಲಾಂಛನವನ್ನು ಕಡ್ಡಾಯವಾಗಿ ಬಳಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ/(ಪಂಚಾಯತ್ ರಾಜ್) ಇವರ ಆಪ್ತ ಶಾಖೆಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆಗೆ

4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆಗೆ
5. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆಗೆ
6. ವಿಶೇಷ ಆಯುಕ್ತರು, ಎಂ.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆಗೆ
7. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
8. ಜಂಟಿ ನಿರ್ದೇಶಕರು ಆಡಳಿತ/ತಾಂತ್ರಿಕ/ತೋಟಗಾರಿಕೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
9. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಎಲ್ಲಾ ಅಧಿಕಾರಿಗಳಿಗೆ/ಸಿಬ್ಬಂದಿಗಳಿಗೆ
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
11. ನಿರ್ದೇಶಕರು, ಪಂಚಾಯತ್ ರಾಜ್ 1 ಮತ್ತು 2/ಸುವರ್ಣ ಗ್ರಾಮೋದಯ ಮತ್ತು ಪಶ್ಚಿಮ ಘಟ್ಟ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
12. ನಿರ್ದೇಶಕರು, ಮಹಾತ್ಮ ಗಾಂಧಿ ಇಂಧನ ಮತ್ತು ಅಭಿವೃದ್ದಿ ಸಂಸ್ಥೆ, ಜಕ್ಕೂರು, ಬೆಂಗಳೂರು.
13. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ದಿ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು-570011
14. ಶ್ರೀ. ವೈ. ಮಹಾಂಕಾಳಪ್ಪ, ಸಂಪಾದಕರು ಕರ್ನಾಟಕ ವಿಕಾಸ ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರು ಇದನ್ನು ಕರ್ನಾಟಕ ವಿಕಾಸ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಿದೆ.
15. ಸಾರ್ವಜನಿಕ ಸಂಪರ್ಕಾಧಿಕಾರಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
16. ವಿಶೇಷ ಅಧಿಕಾರಿ ಗಣಕ ಕೋಶ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
17. M/S Effia technologies ಇವರಿಗೆ www.end2endsoultions.com ನಲ್ಲಿ ಪ್ರಕಟಿಸಲು/ ಅಳವಡಿಸಲು ಕೋರಿದೆ.
18. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್
19. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತ್
20. ರಾಜ್ಯದ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್